# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1411
ಮಾನ್ಯ ಸದಸ್ಯರ ಹೆಸರು : ಶ್ರೀ ಕೆ.ಪ್ರತಾಪ ಸಿಂಹ ನಾಯಕ್ (ವಿಧಾನ ಸಭಾ ಕ್ಷೇತ್ರ)
ಉತ್ತರಿಸುವ ದಿನಾಂಕ : 20.03.2025
ಉತ್ತರಿಸುವ ಸಚಿವರು. : ಗೃಹ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಸೈಬರ್ ಕ್ರೈಂ ಸಂಬಂಧಿತ ಎಷ್ಟು ಪ್ರಕರಣಗಳು ದಾಖಲಾಗಿವೆ: | ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಸೈಬರ್ ಕ್ರೈಂ ಸಂಬಂಧಿತ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ:-<br><br>ವರ್ಷ \| ಪ್ರಕರಣಗಳ ಸಂಖ್ಯೆ<br>2023 \| 22224<br>2024 \| 22415 |
| ಆ) | ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸೈಬರ್ ಕ್ರೈಂ ಪ್ರಕರಣಗಳು ವ್ಯಾಪಕವಾಗಿ ಮತ್ತು ನಿರಂತರವಾಗಿ ನಡೆಯುತ್ತಿದ್ದು, ಅವುಗಳನ್ನು ನಿಯಂತ್ರಣಕ್ಕೆ ತರಲು ಸರ್ಕಾರ ಇದುವರೆಗೆ ವಿಫಲವಾಗಿರಲು ಕಾರಣಗಳೇನು: | ರಾಜ್ಯದಲ್ಲಿ ಸೈಬರ್ ಅಪರಾಧಗಳನ್ನು ನಿಯಂತ್ರಿಸುವಲ್ಲಿ ಸರ್ಕಾರವು ವಿಫಲ ವಾಗಿರುವುದಿಲ್ಲ.<br><br>ಸೈಬರ್ ಅಪರಾಧ ಪ್ರಕರಣಗಳಲ್ಲಿ ಆಧುನಿಕ ಮತ್ತು ತಂತ್ರಜ್ಞಾನ ಆಧರಿತ ತನಿಖೆಯನ್ನು ಕೈಗೊಳ್ಳಲು ಆಧುನಿಕ ಸಲಕರಣೆ/ಉಪಕರಣಗಳನ್ನು ಒದಗಿಸಲಾಗಿರುತ್ತದೆ. ಸೈಬರ್ ಅಪರಾಧಗಳ ತನಿಖೆಯನ್ನು ನಿರ್ವಹಿಸಲು ಅಗತ್ಯ ತಾಂತ್ರಿಕ ತರಬೇತಿಯನ್ನು ನೀಡಲಾಗಿರುತ್ತದೆ. |
| ಇ) | ರಾಜ್ಯದಲ್ಲಿ ವ್ಯಾಪಕವಾಗಿ ನಡೆಯುತ್ತಿರುವ ಸೈಬರ್ ಕ್ರೈಂ ಪ್ರಕರಣಗಳನ್ನು ಶಾಶ್ವತವಾಗಿ ತಡೆಯಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು? | **ಸೈಬರ್ ಅಪರಾಧ ಕೃತ್ಯಗಳನ್ನು ನಿಯಂತ್ರಿಸಲು ಮತ್ತು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:-**<br><br>➢ ಡಿಜಿಟಲ್ ಅರೆಸ್ಟ್ ವಂಚನೆಯ ಪ್ರಕರಣಗಳ ಬಗ್ಗೆ, ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ.<br>➢ ಶಾಲಾ ಕಾಲೇಜುಗಳಿಗೆ, ಇತರೆ ಸಂಸ್ಥೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿ ಹಾಗೂ ಸಾರ್ವಜನಿಕರುಗಳಿಗೆ ಡಿಜಿಟಲ್ ಅರೆಸ್ಟ್ ವಂಚನೆಯ ಬಗ್ಗೆ, ಜಾಗೃತಿ ಮೂಡಿಸಲು ಜಾಗೃತಾ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಸಾರ್ವಜನಿಕರನ್ನು ಇಂತಹ ಅಪರಾಧಿಕ ಕೃತ್ಯಗಳ ಮೂಲಕ ವಂಚಿಸಲು ನಕಲಿ ಸಿಮ್‌ಕಾರ್ಡ್ ಹಾಗೂ ನಕಲಿ ಬ್ಯಾಂಕ್ ಖಾತೆಗಳನ್ನು ಮಾರಾಟಕ್ಕೆ ಬಳಸುವ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟೆಲಿಗ್ರಾಂ ಹಾಗೂ ಇತರೆ ಅಂತರ್ಜಾಲ ವೇದಿಕೆಗಳಲ್ಲಿ ಸಕ್ರಿಯವಾಗಿರುವ ಖಾತೆಗಳು ಹಾಗೂ ಗುಂಪುಗಳನ್ನು ಪತ್ತೆ ಹಚ್ಚಿ, 268 ಫೇಸ್‌ಬುಕ್ |

ಗುಂಪುಗಳು, 465 ಟೆಲಿಗ್ರಾಂ ಗುಂಪುಗಳು, 15 ಇನ್‌ಸ್ಟಾಗ್ರಾಂ ಖಾತೆಗಳು ಹಾಗೂ 61 WhatsApp ಗುಂಪುಗಳನ್ನು ನಿಷ್ಕ್ರಿಯಗೊಳಿಸಲಾಗಿರುತ್ತದೆ.

- ಸೈಬರ್ ವಂಚಕರು ವಿಡಿಯೋ/WhatsApp ಮೂಲಕ ಸಾರ್ವಜನಿಕರಿಗೆ ಕರೆ ಮಾಡಿ ನೀವು ಮನಿಲ್ಯಾಂಡರಿಂಗ್ ನಲ್ಲಿ ಮತ್ತು ಮಾದಕ ವಸ್ತು ಗಾಂಜಾ ಅಕ್ರಮ ಸಾಗಾಣಿಕೆ ಪ್ರಕರಣದಲ್ಲಿ ಭಾಗಿಯಾಗಿದ್ದೀರಿ ಎಂದು ಸಾರ್ವಜನಿಕರಿಗೆ ಭಯ ಪಡಿಸಿ ಅವರಿಂದ ಬ್ಯಾಂಕ್ ಖಾತೆ, ಆಧಾರ ಕಾರ್ಡ್, ಇತ್ಯಾದಿ ದಾಖಲೆಗಳನ್ನು ಪರಿಶೀಲನೆ ನೆಪದಲ್ಲಿ ಪಡೆದುಕೊಂಡು ಅವರಿಂದ ಹಣ ಪಡೆದು ವಂಚನೆ ಮಾಡುತ್ತಿದ್ದು, ಈ ಬಗ್ಗೆ ಸಾರ್ವಜನಿಕರಿಗೆ ಸೈಬರ್ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.
- ಡಿಜಿಟಲ್ ಅರೆಸ್ಟ್ ಕುರಿತು ಸೋಷಿಯಲ್ ಮೀಡಿಯಾದಲ್ಲಿ/ ದಿನಪತ್ರಿಗಳಲ್ಲಿ ಜಾಹೀರಾತು ನೀಡಿ ಸಾರ್ವಜನಿಕರು ಜಾಗೃತಿಯಿಂದ ಇರುವಂತೆ ಅರಿವು ಮೂಡಿಸಲಾಗುತ್ತಿದೆ.
- ಪ್ರಮುಖ ಮೊಬೈಲ್ ಸರ್ವೀಸ್ ಪ್ರೊವೈಡರ್‌ಗಳ ಮುಖಾಂತರ ಕರೆಗಳು ಸ್ವೀಕರಿಸುವ ಮೊದಲು ಸೈಬರ್ ಅಪರಾಧಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ.
- ಕೇಂದ್ರ ಸರ್ಕಾರವು ಸಾರ್ವಜನಿಕರ ಅನುಕೂಲಕ್ಕಾಗಿ National Cyber Crime Reporting Portal ಅನ್ನು ಪ್ರಾರಂಭಿಸಿದ್ದು ಈ ಮೂಲಕ 1930 ಹಾಗೂ 112 ಸಹಾಯವಾಣಿಯನ್ನು ಪ್ರಾರಂಭಿಸಲಾಗಿದ್ದು, ವಂಚನೆಗೆ ಒಳಗಾದ ಸಾರ್ವಜನಿಕರು ಈ ಪೋರ್ಟಲ್ ಮೂಲಕ ಪ್ರಕರಣವನ್ನು ದಾಖಲಿಸಲು ಅವಕಾಶ ಕಲ್ಪಿಸಿ ಕೊಡಲಾಗಿರುತ್ತದೆ. ಪೋರ್ಟಲ್ ನಿಂದ ರವಾನೆಯಾದಂತಹ ದೂರುಗಳನ್ನು CEN ಪೊಲೀಸ್ ಠಾಣೆಗಳಲ್ಲಿ ಪರಿಶೀಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.
- ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 43 ಸೆನ್ ಪೊಲೀಸ್ ಠಾಣೆಗಳ ಅಧಿಕಾರಿ ಹಾಗೂ ಸಿಬ್ಬಂದಿ ಸೇರಿದಂತೆ, 1063 ಪೊಲೀಸ್ ಠಾಣೆಗಳ ನುರಿತ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸಿಐಡಿ ಸೈಬರ್ ಕ್ರೈಂ ಟ್ರೈನಿಂಗ್ ಸೆಂಟರ್‌ನಲ್ಲಿ ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಈ ತರಬೇತಿ ಮೂಲಕ, ಡಿಜಿಟಲ್ ಅರೆಸ್ಟ್ ವಂಚನೆ ಪ್ರಕರಣಗಳ ಜೊತೆಗೆ ಎಲ್ಲಾ ರೀತಿಯ ಸೈಬರ್ ಅಪರಾಧ ಪ್ರಕರಣಗಳ ತನಿಖೆ ಹಾಗೂ ಅಪರಾಧ ತಡೆ ಬಗ್ಗೆ ಅಗತ್ಯ ಕಾರ್ಯಗಾರಗಳನ್ನು ಆಯೋಜಿಸಲಾಗುತ್ತಿರುತ್ತದೆ.

ಸಂಖ್ಯೆ: ಹೆಚ್‌ಡಿ 43 ಪಿಸಿಕ್ಯೂ 2025

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು